ಸಮಸ್ತ ಕನ್ನಡಿಗರ ಏಕೈಕ ಸಂಜೆ ದಿನಪತ್ರಿಕೆ

ಈ ಸಂಜೆ

Sunday, February 7th, 2010

# ಬೀದಿ ನಾಯಿಗಳ ದತ್ತು ಸ್ವೀಕಾರಕ್ಕೆ ಚಾಲನೆ



ಬೆಂಗಳೂರು ,ಫೆ.7 - ಜೈನ್ ವಿಶ್ವವಿದ್ಯಾಲಯ ಸರ್ಕಾರೇತರ ಸಂಸ್ಥೆಯೊಂದಿಗೆ ಬೀದಿ ನಾಯಿಗಳ ದತ್ತು ಕ್ರಿಯಾ ಯೋಜನೆಗೆ ಚಾಲನೆ ನೀಡಲಾಯಿತು. ಸಮೂಹ ಶಿಕ್ಷಣ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಸಾರ್ವಜನಿಕರಲ್ಲಿ ಶ್ವಾನ ನಿರ್ವಹಣೆ ಹಾಗೂ ಸಂರಕ್ಷಣೆ ಕುರಿತು ಸಹ ಅರಿವು ಮೂಡಿಸುವ ದಿಷ್ಠಿಯಿಂದ ಬೀದಿ ನಾಯಿಗಳನ್ನು ದತ್ತು ತೆಗೆದುಕೊಳ್ಳುವ ಯೋಜನೆಯನ್ನು ಪ್ರಥಮ ಬಾರಿಗೆ ಜೈನ್ ವಿಶ್ವವಿದ್ಯಾಲಯ ಹಮ್ಮಿಕೊಂಡಿದೆ.

ಈ ಯೋಜನೆಯಿಂದ ಶ್ವಾನ ಪ್ರಿಯರಿಗೆ ದತ್ತು ಪಡೆಯುವ ಅವಕಾಶ ಒದಗಿದ್ದು ಇಂದಿನ ದತ್ತು ಸ್ವೀಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಪ್ರಾಣಿ ಪ್ರಿಯರು ತಮ್ಮ ಅನುಭವಗಳನ್ನು ಹಂಚಿಕೊಂಡರು.

ಈ ಯೋಜನೆ 2009-2015ರ ಅವಧಿಗೆ ಸುದೀರ್ಘ ಯೋಜನೆಯಾಗಿದ್ದು ಸರ್ಕಾರದೊಂದಿಗೆ ಶಿಕ್ಷಣ ಸಂಸ್ಥೆಗಳು, ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ಸಾರ್ವಜನಿಕರು ಹಾಗೂ ಸರ್ಕಾರೇತರ ಸಂಸ್ಥೆಗಳ ಮೂಲಕ ಶ್ವಾನ ನಿರ್ವಹಣೆ ಹಾಗೂ ಸಂರಕ್ಷಣೆ ಕುರಿತು ರಾಜ್ಯಾದ್ಯಂತ ಜಾಗೃತಿ ಮೂಡಿಸುವ ಉದ್ದೇಶವನ್ನು ವಿಶ್ವವಿದ್ಯಾಲಯ ಹೊಂದಿದೆ.